ಪ್ರಜಾವಾಣಿ

ಭಾನುವಾರ • ಮಾರ್ಚ್ 5, 2023

# 7ರಂದು ರೋಟರಿ ಆಸ್ಪತ್ರೆಯ ಹೊಸ ಕೊಠಡಿ ಉದ್ಘಾಟನೆ

ಪ್ರಜಾವಾಣಿ ವಾರ್ತೆ

ಕಾರ್ಕಳ: ಇಲ್ಲಿನ ಡಾ ಟಿಎಂಎ ಪೈ ರೋಟರಿ ಆಸ್ಪತ್ರೆಯ ಹೊಸ ಹೊರರೋಗಿ ವಿಭಾಗ ಹಾಗೂ ಶಸ್ತ್ರ ಚಿಕಿತ್ಸಾ ಕೊಠಡಿಗಳ ಉದ್ಘಾಟನೆ ಮಾ.7ರಂದು ಬೆಳಿಗ್ಗೆ 9.30ಕ್ಕೆ ನಡೆಯಲಿದೆ ಎಂದು ಆಸ್ಪತ್ರೆಯ ಮುಖ್ಯ ವೈದ್ಯಾಧಿಕಾರಿ ಡಾ. ಕೀರ್ತಿನಾಥ ಬಲ್ಲಾಳ ಹೇಳಿದರು.

ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಹ ಕುಲಾಧಿಪತಿ ಡಾ. ಎಚ್.ಎಸ್.ಬಲ್ಲಾಳ್ ಅಧ್ಯಕ್ಷತೆಯಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಇಂಧನ, ಕನ್ನಡ ಮತ್ತು ಸಂಸ್ಕೃತಿ ಸಚಿವ ವಿ. ಸುನಿಲ್ ಕುಮಾರ್, ಮಾಹೆ ಮಣಿಪಾಲದ ಸಹ ಉಪಕುಲಪತಿ ಡಾ. ಶರತ್ ಕುಮಾರ್ ರಾವ್, ಉಪಕುಲಪತಿ ಡಾ. ವೆಂಕಟೇಶ್, ಕಾಲೇಜಿನ ಡೀನ್ ಡಾ. ಪದ್ಮರಾಜ್ ಹೆಗ್ಡೆ, ಡಾ. ಆನಂದ್ ವೇಣುಗೋಪಾಲ್, ಡಾ.ಅವಿನಾಶ್ ಶೆಟ್ಟಿ ಹಾಗೂ ಹಿರಿಯ ವೈದ್ಯರು ಉಪಸ್ಥಿತರಿರುವರು.

ಆಸ್ಪತ್ರೆಯ ವಿಸ್ತರಣೆಯು ಕಾರ್ಕಳ ಮತ್ತು ಸುತ್ತಮುತ್ತಲಿನ ಜನರಿಗೆ ಕೈಗೆಟುಕುವ ಮತ್ತು ಸುಲಭವಾಗಿ ಆರೋಗ್ಯ ಸೇವೆಯನ್ನು ಒದಗಿಸಲಿದೆ. ಹೊಸ ಸೌಲಭ್ಯಗಳು, ಉಪಕರಣಗಳು ಮತ್ತು ಸೇವೆಗಳ ಮೂಲಕ ರೋಗಿಗಳಿಗೆ ಉತ್ತಮ ಸೇವೆ ಸಲ್ಲಿಸಲು ಸಾಧ್ಯವಾಗಲಿದೆ.

ಸುದ್ದಿಗೋಷ್ಠಿಯಲ್ಲಿ ಮಾಹೆ ಮಣಿಪಾಲದ ಬೋಧನಾ ಆಸ್ಪತ್ರೆಗಳ ಮಾರ್ಕೆಟಿಂಗ್ ಮುಖ್ಯಸ್ಥ ಸಚಿನ್ ಕಾರಂತ್, ಮೋಹನ್ ಶೆಟ್ಟಿ, ಆಸ್ಪತ್ರೆಯ ಮ್ಯಾನೇಜರ್ ನಟೇಶ್ ಕುಮಾರ ಇದ್ದರು.

ವಿಜಯ ಕರ್ನಾಟಕ

ಸೋಮವಾರ, 6 ಮಾರ್ಚ್ 2023, ಮಂಗಳೂರು

# ನಾಳೆ ಹೊರರೋಗಿ ವಿಭಾಗ ಉದ್ಘಾಟನೆ

**ಕಾರ್ಕಳ:** ಡಾ. ಟಿಎಂಎ ಪೈ ರೋಟರಿ ಆಸ್ಪತ್ರೆಯಲ್ಲಿ ವಿಸ್ತರಿಸಿದ ಆಸ್ಪತ್ರೆ, ರೋ. ಕೆ. ಕೃಷ್ಣ ಪ್ರಭು ಒಪಿಡಿ ಬ್ಲಾಕ್ ಮತ್ತು ಹೊಸ ಆಪರೇಷನ್ ಥಿಯೇಟರ್ ಕಾಂಪ್ಲೆಕ್ಸ್‌ನ ಉದ್ಘಾಟನೆ ಮಾರ್ಚ್ 7ರಂದು ಬೆಳಗ್ಗೆ 9.30ಕ್ಕೆ ನಡೆಯಲಿದೆ ಎಂದು ಆಸ್ಪತ್ರೆ ಮುಖ್ಯ ವೈದ್ಯಾಧಿಕಾರಿ ಡಾ. ಕೀರ್ತಿನಾಥ ಬಲ್ಲಾಳ್ ಹೇಳಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿ, ರಾಜ್ಯ ಇಂಧನ ಮತ್ತು ಕನ್ನಡ ಮತ್ತು ಸಂಸ್ಕೃತಿ ಸಚಿವ ವಿ. ಸುನಿಲ್ ಕುಮಾರ್ ಉದ್ಘಾಟಿಸಲಿದ್ದಾರೆ ಎಂದರು.

ಸುದ್ದಿಗೋಷ್ಠಿಯಲ್ಲಿ ಮಾಹೆ ಮಣಿಪಾಲದ ಭೋದನಾ ಆಸ್ಪತ್ರೆಗಳ ಮಾರ್ಕೆಟಿಂಗ್ ಮುಖ್ಯಸ್ಥ ಸಚಿನ್ ಕಾರಂತ್, ಮಣಿಪಾಲದ ಮಾರ್ಕೆಟಿಂಗ್ ಮ್ಯಾನೇಜರ್ ಮೋಹನ್ ಶೆಟ್ಟಿ, ಕಾರ್ಕಳ ಆಸ್ಪತ್ರೆಯ ಮ್ಯಾನೇಜರ್ ನಟೇಶ್ ಕುಮಾರ್ ಉಪಸ್ಥಿತರಿದ್ದರು.

ವಿಜಯವಾಣಿ
VIJAYAVANI » MANGALURU
ಭಾನುವಾರ 5 ಮಾರ್ಚ್ 2023
5 MARCH 2023

# 7ಕ್ಕೆ ಡಾ.ಟಿಎಂಎ ಪೈ ರೋಟರಿ ಒಪಿಡಿ ಬ್ಲಾಕ್ ಉದ್ಘಾಟನೆ

**ಕಾರ್ಕಳ:** ಡಾ.ಟಿಎಂಎ ಪೈ ರೋಟರಿ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸಿ ಹೊಸದಾಗಿ ವಿಸ್ತರಿಸಲಾದ ರೊ.ಕೆ.ಕೃಷ್ಣ ಪ್ರಭು ಒಪಿಡಿ ಬ್ಲಾಕ್ ಮತ್ತು ಹೊಸ ಆಪರೇಷನ್ ಥಿಯೇಟರ್ ಕಾಂಪ್ಲೆಕ್ಸ್ ಮಾ.7ರಂದು ಲೋಕಾರ್ಪಣೆಗೊಳ್ಳಲಿದೆ ಎಂದು ಕಾರ್ಕಳದ ಡಾ.ಟಿಎಂಎ ಪೈ ರೋಟರಿ ಆಸ್ಪತ್ರೆಯ ಮುಖ್ಯ ವೈದ್ಯಾಧಿಕಾರಿ ಡಾ.ಕೀರ್ತಿನಾಥ ಬಲ್ಲಾಳ್ ಹೇಳಿದರು.

ಕಾರ್ಕಳ ಡಾ.ಟಿಎಂಎ ಪೈ ರೋಟರಿ ಆಸ್ಪತ್ರೆಯಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಆಸ್ಪತ್ರೆ ಕಾರ್ಕಳದ ಹೃದಯ ಭಾಗದಲ್ಲಿದ್ದು ಹಲವಾರು ವರ್ಷಗಳಿಂದ ಈ ಪ್ರದೇಶದಲ್ಲಿ ವಿಶ್ವಾಸಾರ್ಹ ಮತ್ತು ನಂಬುಗೆಯ ಆರೋಗ್ಯ ಸೇವೆ ಒದಗಿಸುತ್ತಿದೆ ಎಂದರು.

ಸಚಿವ ವಿ.ಸುನೀಲ್ ಕುಮಾರ್ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದು, ಮಾಹೆ ಮಣಿಪಾಲ ಆರೋಗ್ಯ ವಿಜ್ಞಾನ ಸಹ ಉಪ ಕುಲಪತಿ ಡಾ.ಶರತ್ ಕುಮಾರ್ ರಾವ್ ಹಾಗೂ ಮಣಿಪಾಲ ಮಾಹೆಯ ಉಪಕುಲಪತಿ ಲೆ.ಜ. ಡಾ.ಎಂ.ಡಿ.ವೆಂಕಟೇಶ್ ಗೌರವ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಮಣಿಪಾಲ ಮಾಹೆಯ ಸಹ ಕುಲಾಧಿಪತಿ ಡಾ.ಎಚ್.ಎಸ್.ಬಲ್ಲಾಳ್ ಅಧ್ಯಕ್ಷತೆ ವಹಿಸುವರು. ಕಸ್ತೂರ್ಬಾ ವೈದ್ಯಕೀಯ ಕಾಲೇಜಿನ ಡೀನ್ ಡಾ.ಪದ್ಮರಾಜ್ ಹೆಗ್ಡೆ, ಮಾಹೆ ಮಣಿಪಾಲದ ಬೋಧನಾ ಆಸ್ಪತ್ರೆಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ಆನಂದ್ ವೇಣುಗೋಪಾಲ್, ಕಸ್ತೂರ್ಬಾ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ, ರೋಟರಿ ಸ್ನೇಹಿತರು ಹಾಗೂ ಹಿರಿಯ ವೈದ್ಯರು ಕಾರ್ಯಕ್ರಮದಲ್ಲಿ ಭಾಗವಹಿಸುವರು ಎಂದರು.

ಕಾರ್ಕಳ ಡಾ.ಟಿಎಂಎ ಪೈ ಆಸ್ಪತ್ರೆಯ ವಿಸ್ತರಣೆಯು ಕಾರ್ಕಳ ಮತ್ತು ಸುತ್ತಮುತ್ತಲಿನ ಜನರಿಗೆ ಕೈಗೆಟುಕುವ ಮತ್ತು ಸುಲಭವಾಗಿ ಆರೋಗ್ಯ ಸೇವೆಯನ್ನು ಒದಗಿಸುವ ನಮ್ಮ ಬದ್ಧತೆಯ ಮಹತ್ವದ ಮೈಲಿಗಲ್ಲು. ಹೊಸ ಸೌಲಭ್ಯಗಳು, ಉಪಕರಣಗಳು ಮತ್ತು ಸೇವೆಗಳೊಂದಿಗೆ, ನಾವು ನಮ್ಮ ರೋಗಿಗಳಿಗೆ ಉತ್ತಮ ಸೇವೆ ಸಲ್ಲಿಸಲು ಸಾಧ್ಯವಾಗುತ್ತದೆ ಎಂದರು. ಮಾಹೆ ಮಣಿಪಾಲದ ಬೋಧನಾ ಆಸ್ಪತ್ರೆಗಳ ಮಾರ್ಕೆಟಿಂಗ್ ಮುಖ್ಯಸ್ಥ ಸಚಿನ್ ಕಾರಂತ್, ಮಣಿಪಾಲದ ಮಾರ್ಕೆಟಿಂಗ್ ಮ್ಯಾನೇಜರ್ ಮೋಹನ್ ಶೆಟ್ಟಿ, ಕಾರ್ಕಳ ಆಸ್ಪತ್ರೆಯ ಮ್ಯಾನೇಜರ್ ನಟೇಶ್ ಕುಮಾರ್ ಸುದ್ದಿಗೋಷ್ಠಿಯಲ್ಲಿದ್ದರು.

## ಶೀಘ್ರ 24x7 ಎಮರ್ಜೆನ್ಸಿ ಸೇವೆ

**ಡಾ.**ಟಿಎಂಎ ಪೈ ರೋಟರಿ ಆಸ್ಪತ್ರೆ ಒಳರೋಗಿ, ಹೊರರೋಗಿ ವಿಭಾಗ ಸೇರಿದಂತೆ ಆಧುನಿಕ ಚಿಕಿತ್ಸಾ ಸೌಲಭ್ಯಗಳೊಂದಿಗೆ ಕಾರ್ಯಾಚರಿಸುತ್ತಿದ್ದು, ಶೀಘ್ರವೇ ಎಮರ್ಜೆನ್ಸಿ ಸೇವೆ ಹಾಗೂ ಟ್ರೋಮಾ ಸೆಂಟರ್ ಕಾರ್ಯಾರಂಭವಾಗಲಿದೆ. ಇದರಿಂದ ತುರ್ತು ಚಿಕಿತ್ಸೆ ಸಿಗಲಿದೆ ಹಾಗೂ ಸಮಯ, ಹಣದ ಜತೆಗೆ ಅಮೂಲ್ಯ ಜೀವ ರಕ್ಷಣೆಗೆ ಸಹಕಾರಿಯಾಗಲಿದೆ ಎಂದು ಡಾ.ಕೀರ್ತಿನಾಥ ಬಲ್ಲಾಳ್ ಹೇಳಿದರು. ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆಯಿಂದ ಹೃದಯಶಾಸ್ತ್ರ ನರರೋಗ ಶಾಸ್ತ್ರ ಕ್ಯಾನ್ಸರ್ ಮತ್ತು ಮೂತ್ರಪಿಂಡ ಶಾಸ್ತ್ರದ ಸೂಪರ್ ಸ್ಪೆಷಾಲಿಟಿ ವಿಭಾಗಗಳ ಸಲಹೆಗಾರರ ನಿಯಮಿತ ಭೇಟಿಗಳ ಜತೆಗೆ ಅಸ್ತಿತ್ವದಲ್ಲಿರುವ ಜನರಲ್ ಮೆಡಿಸಿನ್, ಮಕ್ಕಳ ವಿಭಾಗ, ನೇತ್ರಶಾಸ್ತ್ರ, ಪ್ರಸೂತಿ ಮತ್ತು ಸ್ತ್ರೀರೋಗ ಶಾಸ್ತ್ರ, ಇಎನ್‌ಟಿ, ಅರಿವಳಿಕೆ ಮತ್ತು ಚರ್ಮ ರೋಗ ವಿಭಾಗದ ಸೌಲಭ್ಯ ಮುಂದುವರಿಯಲಿದೆ ಎಂದರು.

ಕನ್ನಡಪ್ರಭ
ಭಾನುವಾರ 5.3.2023

# 7ರಂದು ಕಾರ್ಕಳ ಡಾ.ಟಿಎಂಎ ಪೈ ರೋಟರಿ ಆಸ್ಪತ್ರೆ ಶಸ್ತ್ರಚಿಕಿತ್ಸಾ ಕೊಠಡಿ ಉದ್ಘಾಟನೆ



ಮುಖ್ಯ ವೈದ್ಯಾಧಿಕಾರಿ ಡಾ.ಕೀರ್ತಿನಾಥ ಬಲ್ಲಾಳ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.

• **ಕನ್ನಡಪ್ರಭ ವಾರ್ತೆ** ಕಾರ್ಕಳ

ಮಣಿಪಾಲದ ಟಿಎಂಎ ಪೈ ರೋಟರಿ ವಿಸ್ತೃತ ಆಸ್ಪತ್ರೆಯ ಕೆ.ಕೃಷ್ಣ ಪ್ರಭು ಒಪಿಡಿ ಬ್ಲಾಕ್ ಮತ್ತು ಹೊಸ ಆಪರೇಷನ್ ಥಿಯೇಟರ್ ಕಾಂಪ್ಲೆಕ್ಸ್‌ನ ಉದ್ಘಾಟನೆ ಮಾ.7 ರಂದು ನಡೆಯಲಿದೆ ಎಂದು ಕಾರ್ಕಳದ ಡಾ.ಟಿಎಂಎ ಪೈ ರೋಟರಿ ಆಸ್ಪತ್ರೆಯ ಮುಖ್ಯ ವೈದ್ಯಾಧಿಕಾರಿ ಡಾ.ಕೀರ್ತಿನಾಥ ಬಲ್ಲಾಳ ಹೇಳಿದರು.

ಅವರು ಕಾರ್ಕಳ ಟಿಎಂಎ ಪೈ ರೋಟರಿ ಆಸ್ಪತ್ರೆಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.

ಇಂಧನ ಮತ್ತು ಕನ್ನಡ ಮತ್ತು ಸಂಸ್ಕೃತಿ ಸಚಿವ ವಿ.ಸುನಿಲ್ ಕುಮಾರ್ ಉದ್ಘಾಟನಾ ಸಮಾರಂಭದ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಸಹಕುಲಪತಿ ಡಾ.ಶರತ್ ಕುಮಾರ್ ರಾವ್, ಉಪಕುಲಪತಿ ಲೆಫ್ಟಿನೆಂಟ್ ಜನರಲ್ ಡಾ.ಎಂ.ಡಿ. ವೆಂಕಟೇಶ್, ಮಾಹೆ ಮಣಿಪಾಲ ಸಹ ಕುಲಾಧಿಪತಿ ಡಾ.ಎಚ್. ಎಸ್. ಬಲ್ಲಾಳ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಕಸ್ತೂರ್ಬಾ ವೈದ್ಯಕೀಯ ಕಾಲೇಜಿನ ಡೀನ್ ಡಾ. ಪದ್ಮರಾಜ್ ಹೆಗ್ಡೆ, ಮಾಹೆ ಮಣಿಪಾಲದ ಬೋಧನಾ ಆಸ್ಪತ್ರೆಗಳ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಡಾ.ಆನಂದ್ ವೇಣುಗೋಪಾಲ್, ಕಸ್ತೂರ್ಬಾ ಆಸ್ಪತ್ರೆ ಮಣಿಪಾಲದ ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ ಭಾಗವಹಿಸಲಿದ್ದಾರೆ ಎಂದರು.

ಹೊಸದಾಗಿ ವಿಸ್ತರಿಸಿದ ಕಾರ್ಕಳ ಆಸ್ಪತ್ರೆಯಲ್ಲಿ ಆಧುನಿಕ ಆಪರೇಷನ್ ಥಿಯೇಟರ್ ಮತ್ತು 24X7 ಎಮರ್ಜೆನ್ಸಿ ಮತ್ತು ಟ್ರಾಮಾ ಸೌಲಭ್ಯಗಳು, ಸುಧಾರಿತ ರೋಗನಿರ್ಣಯದ ಉಪಕರಣಗಳು ಮತ್ತು ಸುಸಜ್ಜಿತ ಐಸಿಯು ಸೌಲಭ್ಯಗಳು ಸೇರಿದಂತೆ ಅತ್ಯಾಧುನಿಕ ಸೌಲಭ್ಯಗಳು ಮತ್ತು ಉಪಕರಣಗಳನ್ನು ಹೊಂದಿರುತ್ತದೆ ಎಂದು ಹೇಳಿದರು.

ಕಾರ್ಕಳ ಆಸ್ಪತ್ರೆಯ ವಿಸ್ತರಣೆಯು ಕಾರ್ಕಳ ಮತ್ತು ಸುತ್ತಮುತ್ತಲಿನ ಜನರಿಗೆ ಕೈಗೆಟುಕುವ ಮತ್ತು ಸುಲಭವಾಗಿ ಆರೋಗ್ಯ ಸೇವೆಯನ್ನು ಒದಗಿಸುವ ನಮ್ಮ ಬದ್ಧತೆಯ ಮಹತ್ವದ ಮೈಲಿಗಲ್ಲು, ಹೊಸ ಸೌಲಭ್ಯಗಳು, ಉಪಕರಣಗಳು ಮತ್ತು ಸೇವೆಗಳೊಂದಿಗೆ, ನಾವು ನಮ್ಮ ರೋಗಿಗಳಿಗೆ ಉತ್ತಮ ಸೇವೆ ಸಲ್ಲಿಸಲು ಸಾಧ್ಯವಾಗುತ್ತದೆ ಮತ್ತು ಅವರು ಸಾಧ್ಯವಾದಷ್ಟು ಉತ್ತಮ ಗುಣಮಟ್ಟದ ಆರೈಕೆಯನ್ನು ಪಡೆಯುವುದನ್ನು ಖಚಿತ ಪಡಿಸಿಕೊಳ್ಳಬಹುದು ಎಂದರು.

ಮಾಹೆ ಮಣಿಪಾಲದ ಬೋಧನಾ ಆಸ್ಪತ್ರೆಗಳ ಮಾರ್ಕೆಟಿಂಗ್ ಮುಖ್ಯಸ್ಥ ಸಚಿನ್ ಕಾರಂತ್, ಮಣಿಪಾಲದ ಮಾರ್ಕೆಟಿಂಗ್ ಮ್ಯಾನೇಜರ್ ಮೋಹನ್ ಶೆಟ್ಟಿ, ಕಾರ್ಕಳ ಆಸ್ಪತ್ರೆಯ ಮ್ಯಾನೇಜರ್ ನಟೇಶ್ ಕುಮಾರ್ ಉಪಸ್ಥಿತರಿದ್ದರು.

ಪ್ರಜಾವಾಣಿ
ಬುಧವಾರ • ಮಾರ್ಚ್ 8, 2023

# ರೋಟರಿ ಆಸ್ಪತ್ರೆಯ ಕೊಡುಗೆ ಅನನ್ಯ

## ಕೆ. ಕೃಷ್ಣ ಪ್ರಭು ಸ್ಮಾರಕ ಒಪಿಡಿ ಬ್ಲಾಕ್ ಉದ್ಘಾಟಿಸಿದ ಸಚಿವ ಸುನಿಲ್ ಕುಮಾರ್

ಪ್ರಜಾವಾಣಿ ವಾರ್ತೆ



ಕಾರ್ಕಳ ಡಾ.ಟಿ.ಎಂ.ಎ.ಪೈ ರೋಟರಿ ಆಸ್ಪತ್ರೆಯಲ್ಲಿ ಕೆ. ಕೃಷ್ಣ ಪ್ರಭು ಸ್ಮಾರಕ ಒಪಿಡಿ ಬ್ಲಾಕ್ ಹಾಗೂ ಹೊಸ ಶಸ್ತ್ರಚಿಕಿತ್ಸಾ ಸಂಕೀರ್ಣವನ್ನು ಮಂಗಳವಾರ ಸಚಿವ ವಿ.ಸುನಿಲ್ ಕುಮಾರ್ ಉದ್ಘಾಟಿಸಿದರು

**ಕಾರ್ಕಳ:** 'ತಾಲ್ಲೂಕಿನ ಡಾ. ಟಿ.ಎಂ.ಎ.ಪೈ ರೋಟರಿ ಆಸ್ಪತ್ರೆ ಆರೋಗ್ಯ ಕ್ಷೇತ್ರದಲ್ಲಿ ಅನನ್ಯ ಸೇವೆ ಸಲ್ಲಿಸುತ್ತಿದೆ' ಎಂದು ಸಚಿವ ವಿ. ಸುನಿಲ್ ಕುಮಾರ್ ಹೇಳಿದರು.

ಇಲ್ಲಿನ ಡಾ.ಟಿ.ಎಂ.ಎ.ಪೈ ರೋಟರಿ ಆಸ್ಪತ್ರೆಯಲ್ಲಿ ಕೆ. ಕೃಷ್ಣ ಪ್ರಭು ಸ್ಮಾರಕ ಒಪಿಡಿ ಬ್ಲಾಕ್ ಹಾಗೂ ಹೊಸ ಶಸ್ತ್ರಚಿಕಿತ್ಸಾ ಸಂಕೀರ್ಣವನ್ನು ಮಂಗಳವಾರ ಉದ್ಘಾಟಿಸಿ ಮಾತನಾಡಿದ ಅವರು, 'ಕೋವಿಡ್ ಸಮಯದಲ್ಲಿ ಆಸ್ಪತ್ರೆಯ ಸೇವೆ ಗಮನೀಯವಾಗಿತ್ತು. ಈಗ ಆಧುನಿಕ ಸೌಲಭ್ಯದೊಂದಿಗೆ ಆಸ್ಪತ್ರೆಯನ್ನು ಮೇಲ್ದರ್ಜೆಗೆ ಏರಿಸುತ್ತಿರುವುದರಿಂದ ಜನರಿಗೆ ಇನ್ನಷ್ಟು ಆರೋಗ್ಯ ಸೇವೆ ಸಿಗುವಂತಾಗಿದೆ' ಎಂದರು.

ಅಧ್ಯಕ್ಷತೆವಹಿಸಿದ್ದ ಮಣಿಪಾಲ ಮಾಹೆಯ ಸಹ ಕುಲಾಧಿಪತಿ ಡಾ. ಎಚ್. ಎಸ್.ಬಲ್ಲಾಳ್ ಮಾತನಾಡಿ, 'ಆಸ್ಪತ್ರೆ ಇನ್ನಷ್ಟು ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳುವ ಮೂಲಕ ಕಾರ್ಕಳದ ಜನರಿಗೆ ಸುಧಾರಿತ ಚಿಕಿತ್ಸೆ ನೀಡಲು ಬದ್ಧವಾಗಿದೆ' ಎಂದರು.

ಲೆಫ್ಟಿನೆಂಟ್ ಜನರಲ್ ಡಾ. ಎಂ.ಡಿ. ವೆಂಕಟೇಶ್ ಮಾತನಾಡಿ, 'ಆಸ್ಪತ್ರೆಯಲ್ಲಿ ಶೀಘ್ರದಲ್ಲೇ ಅಪಘಾತ ಮತ್ತು ತುರ್ತು ಚಿಕಿತ್ಸಾ ವಿಭಾಗ, ಸಿಟಿ ಸ್ಕ್ಯಾನ್ ಸೇರಿದಂತೆ ಇನ್ನಷ್ಟು ಸೌಲಭ್ಯಗಳನ್ನು ಆರಂಭಿಸಲಾಗುವುದು' ಎಂದರು.

ಕಸ್ತೂರ್ಬಾ ವೈದ್ಯಕೀಯ ಕಾಲೇಜಿನ ಡೀನ್ ಡಾ. ಪದ್ಮರಾಜ್ ಹೆಗ್ಡೆ, ಮಾಹೆ ಮಣಿಪಾಲದ ಬೋಧನಾ ಆಸ್ಪತ್ರೆಗಳ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಡಾ. ಆನಂದ್ ವೇಣುಗೋಪಾಲ್, ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ ಇದ್ದರು.

ಡಾ. ಶರತ್ ಕುಮಾರ್ ರಾವ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಆಸ್ಪತ್ರೆಯ ಮುಖ್ಯ ವೈದ್ಯಾಧಿಕಾರಿ ಡಾ. ಕೀರ್ತಿನಾಥ ಬಲ್ಲಾಳ ಸ್ವಾಗತಿಸಿದರು. ಡಾ. ಸಂಜಯ್ ಕುಮಾರ್ ವಂದಿಸಿದರು.

**ಮುಖ್ಯಾಂಶಗಳು**

- 'ಶೀಘ್ರದಲ್ಲೇ ಅಪಘಾತ, ತುರ್ತು ಚಿಕಿತ್ಸಾ ವಿಭಾಗ ಆರಂಭ'
- 'ಜನತೆಗೆ ಸುಧಾರಿತ ಚಿಕಿತ್ಸೆ ನೀಡಲು ಆಸ್ಪತ್ರೆ ಬದ್ಧ'

ಕನ್ನಡಪ್ರಭ
ಬುಧವಾರ 8.3.2023

# ಕಾರ್ಕಳ: ಮಣಿಪಾಲ ರೋಟರಿ ಆಸ್ಪತ್ರೆ ಒಪಿಡಿ ಬ್ಲಾಕ್, ಒಟಿ ಸಮುಚ್ಚಯ ಉದ್ಘಾಟನೆ



ಸಚಿವ ಸುನಿಲ್ ಒಪಿಡಿ ಬ್ಲಾಕ್ ಮತ್ತು ಹೊಸ ಆಪರೇಷನ್ ಥಿಯೇಟರ್ ಸಮುಚ್ಚಯ ಉದ್ಘಾಟಿಸಿದರು.

• **ಕನ್ನಡಪ್ರಭ ವಾರ್ತೆ** ಕಾರ್ಕಳ

ಕಾರ್ಕಳದ ಜನರ ಪಾಲಿಗೆ ಕಾರ್ಕಳದ ಮಣಿಪಾಲ ಟಿಎಂಎ ಪೈ ರೋಟರಿ ಆಸ್ಪತ್ರೆ ಮಣಿಪಾಲದ ಬಹುದೊಡ್ಡ ಕೊಡುಗೆಯಾಗಿದ್ದು ಆರೋಗ್ಯಕ್ಕೆ ಹೆಚ್ಚಿನ ಮಹತ್ವ ನೀಡಲಾಗುತ್ತಿದೆ ಎಂದು ಇಂಧನ ಮತ್ತು ಕನ್ನಡ ಮತ್ತು ಸಂಸ್ಕೃತಿ ಸಚಿವ ವಿ.ಸುನಿಲ್ ಕುಮಾರ್ ಹೇಳಿದ್ದಾರೆ.

ಮಂಗಳವಾರ ಕಾರ್ಕಳದ ಮಣಿಪಾಲ ಟಿಎಂಎ ಪೈ ರೋಟರಿ ಆಸ್ಪತ್ರೆಯ ವಿಸ್ತೃತವಾದ ಆಸ್ಪತ್ರೆಯ ಕೆ. ಕೃಷ್ಣ ಪ್ರಭು ಒಪಿಡಿ ಬ್ಲಾಕ್ ಮತ್ತು ಹೊಸ ಆಪರೇಷನ್ ಥಿಯೇಟರ್ ಸಮುಚ್ಚಯ ಉದ್ಘಾಟಿಸಿ ಅವರು ಮಾತನಾಡಿದರು.

ಮಣಿಪಾಲ ಆಸ್ಪತ್ರೆಗಳು ಆರೋಗ್ಯ ಸೇವೆಗೆ ಭದ್ರತೆ ನೀಡುತ್ತಿವೆ. ಮೂಲಭೂತ ಸೌಕರ್ಯಗಳಲ್ಲಿ ಆರೋಗ್ಯವೂ ಮುಖ್ಯವಾಗಿದೆ. ಕೋವಿಡ್ ಸಮಯದಲ್ಲಿ ಮಣಿಪಾಲ ಆಸ್ಪತ್ರೆಯ ಸೇವೆ ಅಭಿನಂದನೀಯ ಎಂದರು.

ಉಪಕುಲಪತಿ ಲೆಫ್ಟಿನೆಂಟ್ ಜನರಲ್ ಡಾ.ಎಂ.ಡಿ. ವೆಂಕಟೇಶ್ ಮಾತನಾಡಿ, ಕಾರ್ಕಳ ತಾಲೂಕಿಗೆ ತಜ್ಞ ವೈದ್ಯಕೀಯ ವ್ಯವಸ್ಥೆ ಸ್ಥಳೀಯವಾಗಿ ನೀಡಲಾಗುತ್ತಿದೆ. ಸುಮಾರು 6 ಕೋಟಿ ರು. ವೆಚ್ಚದಲ್ಲಿ ಕಟ್ಟಡ ನವೀಕರಣ ಮಾಡಲಾಗಿದೆ ಎಂದರು.

ಮಾಹೆ ಮಣಿಪಾಲಸಹ ಕುಲಾಧಿಪತಿಗಳು ಡಾ. ಎಚ್.ಎಸ್.ಬಲ್ಲಾಳ್ ಮಾತನಾಡಿ, ಕೋವಿಡ್ ಸಮಯದಲ್ಲಿ ಉಡುಪಿಯ ಟಿ.ಎಂ. ಪೈ ಆಸ್ಪತ್ರೆ ದೇಶದಲ್ಲಿ ಮೊತ್ತ ಮೊದಲ ಬಾರಿಗೆ ಕೋವಿಡ್ ಆಸ್ಪತ್ರೆಯನ್ನಾಗಿ ಪರಿವರ್ತಿಸುವ ಮೂಲಕ ಜನರ ಮೆಚ್ಚುಗೆಗೆ ಪಾತ್ರವಾಗಿತ್ತು ಎಂದರು.

ಕಸ್ತೂರ್ಬಾ ವೈದ್ಯಕೀಯ ಕಾಲೇಜಿನ ಡೀನ್ ಡಾ.ಪದ್ಮರಾಜ್ ಹೆಗ್ಡೆ, ಮಾಹೆ ಮಣಿಪಾಲದ ಬೋಧನಾ ಆಸ್ಪತ್ರೆಗಳ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಡಾ.ಆನಂದ್‌ವೇಣುಗೋಪಾಲ್, ಕಸ್ತೂರ್ಬಾ ಆಸ್ಪತ್ರೆ ಮಣಿಪಾಲದ ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ ಹಾಜರಿದ್ದರು.

ಕೀರ್ತಿನಾಥ ಬಲ್ಲಾಳ ಸ್ವಾಗತಿಸಿದರು. ಸಹಕುಲಪತಿ ಡಾ ಶರತ್ ಕುಮಾರ್ ರಾವ್ ಪ್ರಾಸ್ತಾವಿಕ ಮಾತನಾಡಿದರು. ಡಾ.ಸಂಜಯ್ ಪ್ರಭು ವಂದಿಸಿದರು.

ಉದಯವಾಣಿ

8-3-2023

## ಕಾರ್ಕಳ ಡಾ| ಟಿ ಎಂ ಎ ಪೈ ರೋಟರಿ ಆಸ್ಪತ್ರೆ

# ಕೃಷ್ಣ ಪ್ರಭು ಒಪಿಡಿ ಬ್ಲಾಕ್, ಶಸ್ತ್ರಚಿಕಿತ್ಸಾ ಸಂಕೀರ್ಣ ಉದ್ಘಾಟನೆ

ಕಾರ್ಕಳ, ಮಾ. 7: ಇಲ್ಲಿನ ಡಾ| ಟಿಎಂಎ ಪೈ ರೋಟರಿ ಆಸ್ಪತ್ರೆಯಲ್ಲಿ ನಿರ್ಮಿಸಿದ ನೂತನ ಕೆ. ಕೃಷ್ಣ ಪ್ರಭು ಒಪಿಡಿ ಬ್ಲಾಕ್ ಮತ್ತು ನೂತನ ಶಸ್ತ್ರಚಿಕಿತ್ಸಾ ಸಂಕೀರ್ಣದ ಉದ್ಘಾಟನೆಯನ್ನು ಇಂಧನ ಸಚಿವ ವಿ. ಸುನಿಲ್ ಕುಮಾರ್ ಮಂಗಳವಾರ ಉದ್ಘಾಟಿಸಿದರು.

ಆರೋಗ್ಯ ಕ್ಷೇತ್ರದಲ್ಲಿ ಕೋವಿಡ್ ಸಮಯ ಸೇರಿದಂತೆ ಮಣಿಪಾಲ ಸಂಸ್ಥೆ ಮಾಡುತ್ತಿರುವ ಕಾರ್ಯ ಶ್ಲಾಘನೀಯ. ಪ್ರಸ್ತುತ ಕಾರ್ಕಳದ ಈ ಆಸ್ಪತ್ರೆಯನ್ನು ಆಧುನಿಕ ಸೌಲಭ್ಯದೊಂದಿಗೆ ಮೇಲ್ದರ್ಜೆಗೆ ಏರಿಸುತ್ತಿರುವುದರಿಂದ ಕಾರ್ಕಳದ ಜನತೆಗೆ ಇನ್ನಷ್ಟು ಆರೋಗ್ಯ ಸೇವೆ ಸಿಗುವಂತಾಗಿದೆ ಎಂದು ಹಾರೈಸಿದರು.

ಅಧ್ಯಕ್ಷತೆ ವಹಿಸಿದ್ದ ಮಾಹೆ ವಿ.ವಿ. ಸಹಕುಲಾಧಿಪತಿ ಡಾ| ಎಚ್.ಎಸ್. ಬಲ್ಲಾಳ್ ಮಾತನಾಡಿ, ಕಾರ್ಕಳದ ಆಸ್ಪತ್ರೆಯ ಆರಂಭ ಮತ್ತು ರೋಟರಿ ಸಂಸ್ಥೆಯನ್ನು ಅಭಿನಂದಿಸಿದರು. ಇನ್ನು ಮುಂದೆಯೂ ಈ ಆಸ್ಪತ್ರೆಗೆ ಇನ್ನಷ್ಟು ಅಭಿವೃದ್ಧಿ ಕ್ರಮಗಳನ್ನು ಕೈಗೊಳ್ಳುವುದರ ಮೂಲಕ ಕಾರ್ಕಳದ ಜನತೆಗೆ ಸುಧಾರಿತ ಚಿಕಿತ್ಸೆ ನೀಡಲು ಮಾಹೆ ಮಣಿಪಾಲವು ಬದ್ಧವಾಗಿದೆ ಎಂದರು.



ನೂತನ ಕೆ. ಕೃಷ್ಣ ಪ್ರಭು ಒಪಿಡಿ ಬ್ಲಾಕ್ ಮತ್ತು ನೂತನ ಶಸ್ತ್ರಚಿಕಿತ್ಸಾ ಸಂಕೀರ್ಣವನ್ನು ಸಚಿವ ಸುನಿಲ್ ಕುಮಾರ್ ಉದ್ಘಾಟಿಸಿದರು.

ಕುಲಪತಿ ಲೆ| ಜ| ಡಾ| ಎಂ.ಡಿ. ವೆಂಕಟೇಶ್ ಮಾತನಾಡಿ, ಪ್ರಸ್ತುತ ಸುಧಾರಿತ ಸೌಲಭ್ಯವನ್ನು ಆರಂಭಿಸಿರುವುದರಿಂದ ಆಸ್ಪತ್ರೆ ಸಂಪೂರ್ಣವಾಗಿ ದ್ವಿತೀಯ ಆರೋಗ್ಯ ಕೇಂದ್ರ ಮಟ್ಟಕ್ಕೆ ಏರಿಸಿದಂತಾಗಿದೆ. ಶೀಘ್ರದಲ್ಲೇ 24X7 ಅಪಘಾತ ಮತ್ತು ತುರ್ತು ಚಿಕಿತ್ಸಾ ವಿಭಾಗ, ಸಿಟಿ ಸ್ಕ್ಯಾನ್ ಸೇರಿದಂತೆ ಇನ್ನಷ್ಟು ಸೌಲಭ್ಯವನ್ನು ಆರಂಭಿಸಲಾಗುವುದು. ಆದ್ದರಿಂದ ರೋಗಿಯು ದ್ವಿತೀಯ ಮಟ್ಟದ ಚಿಕಿತ್ಸೆಗಾಗಿ ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆಗೆ ಬರುವ ಅಗತ್ಯವಿಲ್ಲ ಎಂದರು.

ಸಹಕುಲಪತಿ ಡಾ| ಶರತ್ ಕುಮಾರ್ ರಾವ್ ಪ್ರಾಸ್ತಾವಿಕವಾಗಿ ಮಾತನಾಡಿ, ಡಾ| ಟಿಎಂಎ ಪೈ ಆಸ್ಪತ್ರೆಯು ಆರಂಭದಿಂದ ಇಲ್ಲಿಯವರೆಗೆ ಬೆಳೆದು ಬಂದ ದಿನಗಳು ಮತ್ತು ರೋಟರಿಯ ಸಹಕಾರವನ್ನು ನೆನಪಿಸಿದರು.

ಮಣಿಪಾಲ ಕೆಎಂಸಿ ಡೀನ್ ಡಾ| ಪದ್ಮರಾಜ್ ಹೆಗ್ಡೆ, ವೈದ್ಯಕೀಯ ಅಧೀಕ್ಷಕ ಡಾ| ಅವಿನಾಶ್ ಶೆಟ್ಟಿ, ಮಾಹೆ ಮಣಿಪಾಲದ ಬೋಧನ ಆಸ್ಪತ್ರೆಗಳ ಸಿಒಒ ಡಾ| ಆನಂದ್ ವೇಣುಗೋಪಾಲ್ ಮುಂತಾದವರು ಉಪಸ್ಥಿತರಿದ್ದರು.

ಕಾರ್ಕಳ ಡಾ| ಟಿಎಂಎ ಪೈ ರೋಟರಿ ಆಸ್ಪತ್ರೆಯ ಮುಖ್ಯ ವೈದ್ಯಾಧಿಕಾರಿ ಡಾ| ಕೀರ್ತಿನಾಥ ಬಲ್ಲಾಳ್ ಸ್ವಾಗತಿಸಿ, ಡಾ| ಸಂಜಯ್ ಕುಮಾರ್ ವಂದಿಸಿದರು.

ವಿಜಯವಾಣಿ
● VIJAYAVANI » MANGALURU
ಗುರುವಾರ 9 ಮಾರ್ಚ್ 2023
9 MARCH 2023

# ಟಿಎಂಎ ಪೈ ಆಸ್ಪತ್ರೆ ಕಾರ್ಕಳಕ್ಕೆ ದೊಡ್ಡ ಕೊಡುಗೆ



ಕೆ.ಕೃಷ್ಣ ಪ್ರಭು ಒಪಿಡಿ ಬ್ಲಾಕ್ ಮತ್ತು ಹೊಸ ಶಸ್ತ್ರಚಿಕಿತ್ಸಾ ಸಂಕೀರ್ಣವನ್ನು ಸಚಿವ ವಿ.ಸುನೀಲ್ ಕುಮಾರ್ ಉದ್ಘಾಟಿಸಿದರು. ಡಾ.ಎಂ.ಡಿ.ವೆಂಕಟೇಶ್, ಡಾ.ಎಚ್.ಎಸ್.ಬಲ್ಲಾಳ್ ಮತ್ತಿತರರು ಉಪಸ್ಥಿತರಿದ್ದರು.

**ಕಾರ್ಕಳ:** ಕಾರ್ಕಳದ ಜನರ ಪಾಲಿಗೆ ಮಣಿಪಾಲ ಟಿಎಂಎ ಪೈ ರೋಟರಿ ಆಸ್ಪತ್ರೆ ಬಹುದೊಡ್ಡ ಕೊಡುಗೆಯಾಗಿದ್ದು, ಆರೋಗ್ಯಕ್ಕೆ ಹೆಚ್ಚಿನ ಮಹತ್ವ ನೀಡುತ್ತಿದೆ. ಇದೀಗ ಮೇಲ್ದರ್ಜೆಗೆ ಏರಿಸುತ್ತಿದ್ದು, ಇನ್ನಷ್ಟು ಉತ್ತಮ ಆರೋಗ್ಯ ಸೇವೆ ಸಿಗುವಂತಾಗಲಿ ಎಂದು ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವ ವಿ.ಸುನೀಲ್ ಕುಮಾರ್ ಹೇಳಿದರು.

ಕಾರ್ಕಳದ ಮಣಿಪಾಲ ಟಿಎಂಎ ಪೈ ರೋಟರಿ ಆಸ್ಪತ್ರೆಯ ವಿಸ್ತೃತ ಕೆ.ಕೃಷ್ಣ ಪ್ರಭು ಒಪಿಡಿ ಬ್ಲಾಕ್ ಮತ್ತು ಹೊಸ ಶಸ್ತ್ರಚಿಕಿತ್ಸಾ ಸಂಕೀರ್ಣವನ್ನು ಉದ್ಘಾಟಿಸಿ ಮಾತನಾಡಿದರು.

ಉಪಕುಲಪತಿ ಲೆಫ್ಟಿನೆಂಟ್ ಜನರಲ್ ಡಾ.ಎಂ.ಡಿ.ವೆಂಕಟೇಶ್ ಮಾತನಾಡಿ, ಕಾರ್ಕಳ ತಾಲೂಕಿಗೆ ತಜ್ಞ ವೈದ್ಯಕೀಯ ವ್ಯವಸ್ಥೆಯು ಸ್ಥಳೀಯವಾಗಿ ನೀಡಲಾಗುತ್ತಿದೆ ಎಂದರು.

ಮಾಹೆ ಮಣಿಪಾಲ ಸಹ ಕುಲಾಧಿಪತಿ ಡಾ.ಎಚ್.ಎಸ್. ಬಲ್ಲಾಳ್ ಮಾತನಾಡಿ, ಕೋವಿಡ್ ಸಮಯದಲ್ಲಿ ಉಡುಪಿಯ ಟಿ.ಎಂ.ಎ. ಪೈ ಆಸ್ಪತ್ರೆ ದೇಶದಲ್ಲಿ ಮೊತ್ತ ಮೊದಲ ಬಾರಿಗೆ ಕೋವಿಡ್ ಆಸ್ಪತ್ರೆಯನ್ನಾಗಿ ಪರಿವರ್ತಿಸುವ ಮೂಲಕ ಜನರ ಮೆಚ್ಚುಗೆಗೆ ಪಾತ್ರವಾಗಿತ್ತು. ಕಾರ್ಕಳ ಆಸ್ಪತ್ರೆ ವಿಸ್ತರಣೆ ಕಾರ್ಕಳ ಮತ್ತು ಸುತ್ತಮುತ್ತಲಿನ ಜನರಿಗೆ ಕೈಗೆಟುಕುವ ಮತ್ತು ಸುಲಭವಾಗಿ ಆರೋಗ್ಯ ಸೇವೆ ಒದಗಿಸುವ ನಮ್ಮ ಬದ್ಧತೆಯ ಮಹತ್ವದ ಮೈಲಿಗಲ್ಲು. ಹೊಸ ಸೌಲಭ್ಯಗಳು, ಉಪಕರಣಗಳು ಮತ್ತು ಸೇವೆಗಳೊಂದಿಗೆ ರೋಗಿಗಳಿಗೆ ಉತ್ತಮ ಸೇವೆ ಸಲ್ಲಿಸಲು ಸಾಧ್ಯವಾಗುತ್ತದೆ ಎಂದರು.

ಕಸ್ತೂರ್ಬಾ ವೈದ್ಯಕೀಯ ಕಾಲೇಜಿನ ಡೀನ್ ಡಾ.ಪದ್ಮರಾಜ್ ಹೆಗ್ಡೆ, ಮಾಹೆ ಮಣಿಪಾಲದ ಬೋಧನಾ ಆಸ್ಪತ್ರೆಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ಆನಂದ್ ವೇಣುಗೋಪಾಲ್, ಕಸ್ತೂರ್ಬಾ ಆಸ್ಪತ್ರೆ ಮಣಿಪಾಲದ ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ ಉಪಸ್ಥಿತರಿದ್ದರು. ಕೀರ್ತಿನಾಥ ಬಲ್ಲಾಳ ಸ್ವಾಗತಿಸಿದರು. ಸಹಕುಲಪತಿ ಡಾ.ಶರತ್ ಕುಮಾರ್ ರಾವ್ ಪ್ರಸ್ತಾವನೆಗೈದರು. ಡಾ.ಸಂಜಯ್ ಪ್ರಭು ವಂದಿಸಿದರು.

ವಿಜಯ ಕರ್ನಾಟಕ
ಬುಧವಾರ,8 ಮಾರ್ಚ್ 2023,
ಮಂಗಳೂರು

# ಆರೋಗ್ಯ ಕ್ಷೇತ್ರಕ್ಕೆ ಮಣಿಪಾಲ್ ಆಸ್ಪತ್ರೆ ಕೊಡುಗೆ ಅಪಾರ

■ **ವಿಕ ಸುದ್ದಿಲೋಕ** ಕಾರ್ಕಳ



ಮೂಲಸೌಕರ್ಯಗಳಲ್ಲಿ ಒಂದಾದ ಆರೋಗ್ಯ ಸೇವೆ ನೀಡುವ ನಿಟ್ಟಿನಲ್ಲಿ ಮಣಿಪಾಲ್ ಆಸ್ಪತ್ರೆ ಮುಂಚೂಣಿಯಲ್ಲಿದೆ. ರಿಯಾಯಿತಿ ದರದಲ್ಲಿ ಉತ್ಕೃಷ್ಟ ದರ್ಜೆಯ ವೈದ್ಯಕೀಯ ಸೇವೆ ನೀಡುವ ಮೂಲಕ ಜನಮೆಚ್ಚುಗೆಗೆ ಪಾತ್ರವಾಗಿದೆ ಎಂದು ಸಚಿವ ವಿ.ಸುನಿಲ್ ಕುಮಾರ್ ಹೇಳಿದ್ದಾರೆ.

ಮಂಗಳವಾರ ಸ್ಥಳೀಯ ಟಿಎಂಎ ಪೈ ರೋಟರಿ ಆಸ್ಪತ್ರೆಯ ಒಪಿಡಿ ಬ್ಲಾಕ್ ಹಾಗೂ ಶಸ್ತ್ರಚಿಕಿತ್ಸಾ ಸಂಕೀರ್ಣ ಉದ್ಘಾಟಿಸಿ ಮಾತನಾಡಿದರು.

ಮಾಹೆ ವಿವಿ ಸಹ ಕುಲಾಧಿಪತಿ ಡಾ. ಎಚ್.ಎಸ್. ಬಳ್ಳಾಲ್ ಅಧ್ಯಕ್ಷತೆ ವಹಿಸಿ ಮಾತನಾಡಿ, ಸರಕಾರಕ್ಕೆ ಆರೋಗ್ಯ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಎಲ್ಲ ಸಹಕಾರ ನೀಡಲು ಮಣಿಪಾಲ್ ಆಸ್ಪತ್ರೆ ಬದ್ಧವಾಗಿದೆ ಎಂದರು.

ಮಾಹೆ ಉಪಕುಲಪತಿ ಲೆ.ಜ.ಎಂ.ಡಿ ವೆಂಕಟೇಶ್, ಡಾ.ಕೆ. ಶರತ್ ಕುಮಾರ್ ರಾವ್, ಕೆ.ಎಂ.ಸಿ ಮಣಿಪಾಲ್ ಡೀನ್ ಡಾ. ಪದ್ಮರಾಜ ಹೆಗ್ಡೆ, ಮಾಹೆಯ ಬೋಧನಾ ವಿಭಾಗದ ಮುಖ್ಯಸ್ಥ ಡಾ.ಆನಂದ ವೇಣುಗೋಪಾಲ್, ಕಾರ್ಕಳ ಟಿಎಂಎಪೈ ಆಸ್ಪತ್ರೆ ಆಡಳಿತಾಧಿಕಾರಿ ಡಾ.ಕೀರ್ತಿನಾಥ್ ಬಳ್ಳಾಲ್, ಮುಖ್ಯ ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ ಮತ್ತಿತರರು ಉಪಸ್ಥಿತರಿದ್ದರು.

ಕಾರ್ಕಳ ಟಿಎಂಎ ಪೈ ರೋಟರಿ ಆಸ್ಪತ್ರೆಯ ಡಾ.ಕೀರ್ತಿನಾಥ್ ಬಳ್ಳಾಲ್ ಸ್ವಾಗತಿಸಿದರು. ಪ್ರಸೂತಿ ವಿಭಾಗದ ಮುಖ್ಯಸ್ಥ ಡಾ.ಸಂಜಯ್ ಕುಮಾರ್ ವಂದಿಸಿದರು. ಟಿಎಂಎ ಪೈ ರೋಟರಿ ಆಸ್ಪತ್ರೆಯ ಮ್ಯಾನೇಜರ್ ನಟೇಶ್ ಕುಮಾರ್, ಮಾರ್ಕೆಟಿಂಗ್ ವಿಭಾಗದ ಮೋಹನ್ ಶೆಟ್ಟಿ ಸಹಕರಿಸಿದರು.

# Karkala's healthcare services get a major boost with modern amenities at Dr. T. M. A. Pai Rotary Hospital

**New OPD Block and OT Complex inaugurated**



**Karkala, March 7, 2023:** Dr. T. M. A. Pai Rotary Hospital in Karkala has taken a significant step towards providing advanced healthcare services to the community by inaugurating the new OPD Block and OT Complex.

V Sunil Kumar, Minister of Energy and Kannada & Culture inaugurated the new OPD block and OT Complex.

During his speech, Sunil Kumar applauded the Manipal group for its contributions to the field of health, including its efforts during the Covid pandemic. He stated that the modern amenities in the new facilities would elevate Dr. T. M. A. Pai Hospital to a higher level, offering affordable quality healthcare services.

The guests of honour at the event were Lt Gen (Dr) M D Venkatesh, Vice-Chancellor of MAHE Manipal, and Dr Sharath Kumar Rao, Pro Vice-Chancellor of Health Sciences at MAHE Manipal. Dr. H.S. Ballal, Pro-Chancellor of MAHE Manipal, presided over the program.

Lt Gen (Dr) M D Venkatesh remarked that the new facilities have elevated Dr. T. M. A. Pai Hospital to the level of a secondary care center.

He also added that the hospital will soon add more facilities such as 24/7 Trauma and Emergency services and a CT scan, so patients will no longer need to travel to Kasturba Hospital, Manipal for secondary care treatment.

During his introductory speech, Dr. Sharath Kumar Rao reflected on the hospital's growth since its inception and the cooperation of the Rotary Club.

Dr. H.S. Ballal delivered the presidential address, where he thanked the Rotary Club Karkala and Dr. T. M. A. Pai for their commitment to providing advanced treatment to the people of Karkala.

Dr Kirthnath Ballal, Chief Medical Officer of Dr TMA Pai Rotary Hospital, Karkala welcomed the gathering, and Dr Sanjay Kumar proposed the vote of thanks.

The event was also attended by Dr Padmaraj Hegde, Dean of KMC Manipal, Dr Anand Venugopal, Chief Operating Officer of Teaching Hospital, MAHE Manipal, Dr Avinash Shetty, Medical Superintendent of Kasturba Hospital, Manipal, and top officials of MAHE Manipal and Rotary officials.

ನಮ್ಮ UDUPI BULLETIN






# ಡಾ.ಟಿಎಂಎ ಪೈ ರೋಟರಿ ಆಸ್ಪತ್ರೆ ಕಾರ್ಕಳ: ರೋ. ಕೆ. ಕೃಷ್ಣ ಪ್ರಭು ಓಪಿಡಿ ಬ್ಲಾಕ್ ಮತ್ತು ಹೊಸ ಶಸ್ತ್ರಚಿಕಿತ್ಸಾ ಸಂಕೀರ್ಣ ಉದ್ಘಾಟನೆ

By **Udupi Bulletin News Desk** - March 7, 2023 0



**ಕಾರ್ಕಳ, ಮಾ. 7:** ಡಾ. ಟಿ ಎಂ ಎ ಪೈ ರೋಟರಿ ಆಸ್ಪತ್ರೆ ಕಾರ್ಕಳದಲ್ಲಿ ನಿರ್ಮಿಸಿದ ಹೊಸ ರೋ. ಕೆ ಕೃಷ್ಣ ಪ್ರಭು ಓಪಿಡಿ ಬ್ಲಾಕ್ ಮತ್ತು ಹೊಸ ಶಸ್ತ್ರಚಿಕಿತ್ಸಾ ಸಂಕೀರ್ಣದ ಉದ್ಘಾಟನೆಯನ್ನು ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರಾದ ವಿ. ಸುನಿಲ್ ಕುಮಾರ್ ನೆರವೇರಿಸಿದರು. ಬಳಿಕ ಮಾತನಾಡಿದ ಅವರು, ಆರೋಗ್ಯ ಕ್ಷೇತ್ರದಲ್ಲಿ ಕೋವಿಡ್ ಸಮಯ ಸೇರಿದಂತೆ ಮಣಿಪಾಲ ಸಂಸ್ಥೆ ಮಾಡುತ್ತಿರುವ ಕಾರ್ಯವನ್ನು ಶ್ಲಾಘಿಸಿದರು. ಈಗ ಕಾರ್ಕಳದ ಡಾ. ಟಿಎಂಎ ಪೈ ಆಸ್ಪತ್ರೆ ಆಧುನಿಕ ಸೌಲಭ್ಯದೊಂದಿಗೆ ಮೇಲ್ದರ್ಜೆಗೆ ಏರಿಸುತ್ತಿರುವುದರಿಂದ, ಕಾರ್ಕಳದ ಜನತೆಗೆ ಇನ್ನಷ್ಟು ಆರೋಗ್ಯ ಸೇವೆ ಸಿಗುವಂತಾಗಿದೆ ಎಂದರು.

ಲೆಫ್ಟಿನೆಂಟ್ ಜನರಲ್ (ಡಾ) ಎಂ ಡಿ ವೆಂಕಟೇಶ್- ಉಪಕುಲಪತಿಗಳು, ಮಾಹೆ, ಮಣಿಪಾಲ ಮತ್ತು ಡಾ. ಶರತ್ ಕುಮಾರ್ ರಾವ್, ಸಹ – ಉಪ ಕುಲಪತಿಗಳು -ಆರೋಗ್ಯ ವಿಜ್ಞಾನ, ಮಾಹೆ ಮಣಿಪಾಲ ಅವರುಗಳು ಗೌರವ ಅಥಿತಿಗಳಾಗಿದ್ದರು. ಡಾ. ಎಚ್.ಎಸ್. ಬಲ್ಲಾಳ್-ಸಹ ಕುಲಾಧಿಪತಿಗಳು,ಮಾಹೆ, ಮಣಿಪಾಲ ಇವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

ಈ ಸಂದರ್ಭದಲ್ಲಿ ಮಾತನಾಡಿದ ಲೆಫ್ಟಿನೆಂಟ್ ಜನರಲ್ (ಡಾ) ಎಂ ಡಿ ವೆಂಕಟೇಶ್ ಅವರು, ಈಗ ಈ ಸುಧಾರಿತ ಸೌಲಭ್ಯವನ್ನು ಆರಂಭಿಸಿರುವುದರಿಂದ ಕಾರ್ಕಳದ ಟಿಎಂಎ ಪೈ ಆಸ್ಪತ್ರೆ ಸಂಪೂರ್ಣವಾಗಿ ದ್ವಿತೀಯ ಆರೋಗ್ಯ ಕೇಂದ್ರ ಮಟ್ಟಕೆ ಏರಿಸಿದಂತಾಗಿದೆ. ಶೀಘ್ರದಲ್ಲೇ 24*7 ಅಪಘಾತ ಮತ್ತು ತುರ್ತು ಚಿಕಿತ್ಸಾ ವಿಭಾಗ, ಸಿಟಿ ಸ್ಕ್ಯಾನ್ ಸೇರಿದಂತೆ ಇನ್ನಷ್ಟು ಸೌಲಭ್ಯವನ್ನು ಇಲ್ಲಿ ಆರಂಭಿಸಲಾಗುವುದು ಎಂದರು. ಆದ್ದರಿಂದ ಈಗ, ರೋಗಿಯು ದ್ವಿತೀಯ ಮಟ್ಟದ ಚಿಕಿತ್ಸೆಗಾಗಿ ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆಗೆ ಬರುವ ಅಗತ್ಯವಿಲ್ಲ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಡಾ. ಶರತ್ ಕುಮಾರ್ ರಾವ್ ಅವರು, ಡಾ. ಟಿಎಂಎ ಪೈ ಆಸ್ಪತ್ರೆಯು ಆರಂಭದಿಂದ ಇಲ್ಲಿಯವರೆಗೆ ಬೆಳೆದು ಬಂದ ದಿನಗಳನ್ನು ಮತ್ತು ರೋಟರಿ ಸಂಸ್ಥೆಯ ಸಹಕಾರವನ್ನು ನೆನಪಿಸಿದರು. ತನ್ನ ಅಧ್ಯಕ್ಷೀಯ ಭಾಷಣದಲ್ಲಿ ಡಾ. ಎಚ್.ಎಸ್. ಬಲ್ಲಾಳ್ ಅವರು, ಡಾ. ಟಿಎಂಎ ಪೈ ಆಸ್ಪತ್ರೆ ಕಾರ್ಕಳ ಆರಂಭಕ್ಕೆ ಕಾರಣವಾದ ದಿನಗಳನ್ನು ನೆನಪಿಸಿಕೊಂಡರು ಮತ್ತು ಕಾರ್ಕಳದ ರೋಟರಿ ಸಂಸ್ಥೆಗೆ ಅಭಿನಂದನ ಸಲ್ಲಿಸಿದರು. ಇನ್ನು ಮುಂದೆಯೂ ಈ ಆಸ್ಪತ್ರೆಗೆ ಇನ್ನಷ್ಟು ಅಭಿವೃದ್ಧಿ ಕ್ರಮಗಳನ್ನು ಕೈಗೊಳ್ಳುವುದರ ಮೂಲಕ ಕಾರ್ಕಳದ ಜನತೆಗೆ ಸುಧಾರಿತ ಚಿಕಿತ್ಸೆ ನೀಡಲು ಮಾಹೆ ಮಣಿಪಾಲವು ಬದ್ಧವಾಗಿದೆ ಎಂದರು.

ಡಾ. ಟಿಎಂಎ ಪೈ ರೋಟರಿ ಆಸ್ಪತ್ರೆ ಕಾರ್ಕಳದ ಮುಖ್ಯ ವೈದ್ಯಾಧಿಕಾರಿ ಡಾ. ಕೀರ್ತಿನಾಥ ಬಲ್ಲಾಳ ಸ್ವಾಗತಿಸಿ, ಡಾ. ಸಂಜಯ್ ಕುಮಾರ್ ವಂದಿಸಿದರು. ಕಸ್ತೂರ್ಬಾ ವೈದ್ಯಕೀಯ ಕಾಲೇಜಿನ ಡೀನ್ ಡಾ. ಪದ್ಮರಾಜ್ ಹೆಗ್ಡೆ,ಮಾಹೆ ಮಣಿಪಾಲದ ಬೋಧನಾ ಆಸ್ಪತ್ರೆಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ಆನಂದ್ ವೇಣುಗೋಪಾಲ್, ಕಸ್ತೂರ್ಬಾ ಆಸ್ಪತ್ರೆ ಮಣಿಪಾಲದ ವೈದ್ಯಕೀಯ ಅಧೀಕ್ಷಕ ಡಾ. ಅವಿನಾಶ್ ಶೆಟ್ಟಿ, ಮಾಹೆ ಮಣಿಪಾಲದ ಹಿರಿಯ ಅಧಿಕಾರಿಗಳು, ರೋಟರಿ ಗಣ್ಯರು ಹಾಗೂ ಹಿರಿಯ ವೈದ್ಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

KARAVALI XPRESS .COM
ವಿಶ್ವಾಸದ ನಡೆ
Thursday, March 16, 2023

# ಡಾ ಟಿ ಎಂ ಎ ಪೈ ರೋಟರಿ ಆಸ್ಪತ್ರೆ ಕಾರ್ಕಳದಲ್ಲಿ ಹೊಸ ರೋ।। ಕೆ ಕೃಷ್ಣ ಪ್ರಭು ಓ ಪಿ ಡಿ ಬ್ಲಾಕ್ ಮತ್ತು ಹೊಸ ಶಸ್ತ್ರಚಿಕಿತ್ಸಾ ಸಂಕೀರ್ಣದ ಉದ್ಘಾಟನೆ

By Janardhan Kodavoor/Team karavalixpress, March 8, 2023



ಮಣಿಪಾಲ: ಡಾ ಟಿ ಎಂ ಎ ಪೈ ರೋಟರಿ ಆಸ್ಪತ್ರೆ ಕಾರ್ಕಳದಲ್ಲಿ ನಿರ್ಮಿಸಿದ ಹೊಸ ರೋ।। ಕೆ ಕೃಷ್ಣ ಪ್ರಭು ಓ ಪಿ ಡಿ ಬ್ಲಾಕ್ ಮತ್ತು ಹೊಸ ಶಸ್ತ್ರಚಿಕಿತ್ಸಾ ಸಂಕೀರ್ಣ ದ ಉದ್ಘಾಟನೆಯನ್ನು ಮುಖ್ಯ ಅಥಿತಿಯಾಗಿ ಪಾಲ್ಗೊಂಡಿದ್ದ ಕರ್ನಾಟಕ ಸರ್ಕಾರದ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರಾದ ಶ್ರೀ ವಿ ಸುನಿಲ್ ಕುಮಾರ್ ಅವರು ನೆರವೇರಿಸಿದರು. ನಂತರ ನಡೆದ ಸಮಾರಂಭಾದಲ್ಲಿ ಮಾತನಾಡಿದ ಅವರು, " ಆರೋಗ್ಯ ಕ್ಷೇತ್ರದಲ್ಲಿ ಕೋವಿಡ್ ಸಮಯ ಸೇರಿದಂತೆ ಮಣಿಪಾಲ ಸಂಸ್ಥೆ ಮಾಡುತ್ತಿರುವ ಕಾರ್ಯವನ್ನು ಶ್ಲಾಘಿಸಿದರು. ಈಗ ಕಾರ್ಕಳದ ಡಾ ಟಿ ಎಂ ಎ ಪೈ ಆಸ್ಪತ್ರೆ ಕಾರ್ಕಳವನ್ನು ಆಧುನಿಕ ಸೌಲಭ್ಯದೊಂದಿಗೆ ಮೇಲ್ದರ್ಜೆಗೆ ಏರಿಸುತ್ತಿರುವುದರಿಂದ, ಕಾರ್ಕಳದ ಜನತೆಗೆ ಇನ್ನಷ್ಟು ಆರೋಗ್ಯ ಸೇವೆ ಸಿಗುವಂತಾಗಿದೆ ಎಂದರು".

ಲೆಫ್ಟಿನೆಂಟ್ ಜನರಲ್ (ಡಾ) ಎಂ ಡಿ ವೆಂಕಟೇಶ್- ಉಪಕುಲಪತಿಗಳು, ಮಾಹೆ, ಮಣಿಪಾಲ ಮತ್ತು ಡಾ ಶರತ್ ಕುಮಾರ್ ರಾವ್, ಸಹ - ಉಪ ಕುಲಪತಿಗಳು -ಆರೋಗ್ಯ ವಿಜ್ಞಾನ, ಮಾಹೆ ಮಣಿಪಾಲ ಅವರುಗಳು ಗೌರವ ಅಥಿತಿಗಳಾಗಿದ್ದರು. ಡಾ. ಎಚ್.ಎಸ್. ಬಲ್ಲಾಳ್-ಸಹ ಕುಲಾಧಿಪತಿಗಳು , ಮಾಹೆ, ಮಣಿಪಾಲ ಇವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

ಈ ಸಂದರ್ಭದಲ್ಲಿ ಮಾತನಾಡಿದ ಲೆಫ್ಟಿನೆಂಟ್ ಜನರಲ್ (ಡಾ) ಎಂ ಡಿ ವೆಂಕಟೇಶ್ ಅವರು, ಈಗ ಈ ಸುಧಾರಿತ ಸೌಲಭ್ಯವನ್ನು ಆರಂಭಿಸಿರುವುದರಿಂದ ಕಾರ್ಕಳದ ಟಿ ಎಂ ಎ ಪೈ ಆಸ್ಪತ್ರೆ , ಸಂಪೂರ್ಣವಾಗಿ ದ್ವಿತೀಯ ಆರೋಗ್ಯ ಕೇಂದ್ರ ಮಟ್ಟಕೆ ಏರಿಸಿದಂತಾಗಿದೆ . ಶೀಘ್ರದಲ್ಲೇ 24*7 ಅಪಘಾತ ಮತ್ತು ತುರ್ತು ಚಿಕಿತ್ಸಾ ವಿಭಾಗ, ಸಿ ಟಿ ಸ್ಕ್ಯಾನ್ ಸೇರಿದಂತೆ ಇನ್ನಷ್ಟು ಸೌಲಭ್ಯವನ್ನು ಇಲ್ಲಿ ಆರಂಭಿಸಲಾಗುವುದು ಎಂದರು. ಆದ್ದರಿಂದ ಈಗ, ರೋಗಿಯು ದ್ವಿತೀಯ ಮಟ್ಟದ ಚಿಕಿತ್ಸೆಗಾಗಿ ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆಗೆ ಬರುವ ಅಗತ್ಯವಿಲ್ಲ.

ಪ್ರಾಸ್ತಾವಿಕವಾಗಿ ಮಾತನಾಡಿದ ಡಾ ಶರತ್ ಕುಮಾರ್ ರಾವ್ ಅವರು , ಡಾ ಟಿ ಎಂ ಎ ಪೈ ಆಸ್ಪತ್ರೆಯು ಆರಂಭದಿಂದ ಇಲ್ಲಿಯವರೆಗೆ ಬೆಳೆದು ಬಂದ ದಿನಗಳನ್ನು ಮತ್ತು ರೋಟರಿ ಸಂಸ್ಥೆಯ ಸಹಕಾರವನ್ನು ನೆನಪಿಸಿದರು. ತನ್ನ ಅಧ್ಯಕ್ಷೀಯ ಭಾಷಣದಲ್ಲಿ ಡಾ. ಎಚ್.ಎಸ್. ಬಲ್ಲಾಳ್ ಅವರು, ಡಾ ಟಿ ಎಂ ಎ ಪೈ ಆಸ್ಪತ್ರೆ ಕಾರ್ಕಳ ಆರಂಭಕ್ಕೆ ಕಾರಣವಾದ ದಿನಗಳನ್ನು ನೆನಪಿಸಿಕೊಂಡರು ಮತ್ತು ಕಾರ್ಕಳದ ರೋಟರಿ ಸಂಸ್ಥೆಗೆ ಅಭಿನಂದನೆ ಸಲ್ಲಿಸಿದರು. ಇನ್ನು ಮುಂದೆಯೂ ಈ ಆಸ್ಪತ್ರೆ ಗೆ ಇನ್ನಷ್ಟು ಅಭಿವೃದ್ದಿ ಕ್ರಮಗಳನ್ನು ಕೈ ಗೊಳ್ಳುವುದರ ಮೂಲಕ ಕಾರ್ಕಳದ ಜನತೆಗೆ ಸುಧಾರಿತ ಚಿಕಿತ್ಸೆ ನೀಡಲು ಮಾಹೆ ಮಣಿಪಾಲವು ಬದ್ಧವಾಗಿದೆ ಎಂದರು.

ಡಾ ಟಿ ಎಂ ಎ ಪೈ ರೋಟರಿ ಆಸ್ಪತ್ರೆ ಕಾರ್ಕಳದ ಮುಖ್ಯ ವೈದ್ಯಾಧಿಕಾರಿ ಡಾ ಕೀರ್ತಿನಾಥ ಬಲ್ಲಾಳ ಅವರು ಸ್ವಾಗತಿಸಿ , ಡಾ ಸಂಜಯ್ ಕುಮಾರ್ ಅವರು ವಂದಿಸಿದರು. ಕಸ್ತೂರ್ಬಾ ವೈದ್ಯಕೀಯ ಕಾಲೇಜಿನ ಡೀನ್ ಡಾ ಪದ್ಮರಾಜ್ ಹೆಗ್ಡೆ, ಮಾಹೆ ಮಣಿಪಾಲದ ಬೋಧನಾ ಆಸ್ಪತ್ರೆಗಳ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಡಾ ಆನಂದ್ ವೇಣುಗೋಪಾಲ್, ಕಸ್ತೂರ್ಬಾ ಆಸ್ಪತ್ರೆ ಮಣಿಪಾಲದ ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ, ಮಾಹೆ ಮಣಿಪಾಲದ ಹಿರಿಯ ಅಧಿಕಾರಿಗಳು, ರೋಟರಿ ಗಣ್ಯರು ಹಾಗೂ ಹಿರಿಯ ವೈದ್ಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## **Other Links:** Press meet and Inauguration

- http://www.rbnewskannada.com/2023/03/blog-post_51.html
- https://youtu.be/rhSvxP-8gjc
- https://tulunaduvarthe.com/inauguration-of-new-outpatient-department-and-operating-rooms-at-dr-tma-pi-rotary-hospital-karkala-on-7th-march-2023/
- https://www.daijiworld.com/kannada/newsDisplay?newsID=75687&newsCategory=karvalli
- https://www.daijiworld.com/news/newsDisplay?newsID=1056610
- https://nammaudupibulletin.com/suddigalu/pradeshika/reg-news-udupi-1938/
- https://youtube.com/watch?v=NIc7ul--hiw&si=EnSIkaIECMiOmarE
- https://newskarkala.com/2023/03/05/karkala-rotary-hospital-fecility-inaguaration-on-mar-7/
- http://www.rbnewskannada.com/2023/03/blog-post_7.html
- https://www.karavalinews.com/?p=17151
- https://udupixpress.com/ಡಾ-ಟಿ-ಎಂ-ಎ-ಪೈ-ರೋಟರಿ-ಆಸ್ಪತ್ರ/
- https://haikaravali.com/?p=6476
- https://suddisanchalana.com/dr-t-m-a-pai-rotary-hospital-ro-inauguration-of-k-krishna-prabhu-opd-block-and-new-surgical-complex
- https://www.daijiworld.com/news/newsDisplay?newsID=1057716
- https://publicnext.com/article/nid/Udupi/Mangalore/Health-and-Fitness/?lang=kn&node=790969